<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ: **2297/2024**</u>

<u>ಪಿರ್ಯಾದಿ</u> : ಶ್ರೀ ಪ್ರಕಾಶ್.ಹೆಚ್.ಎ, ವಯಸ್ಸು ಸುಮಾರು 35 ವರ್ಷ,
ಬಿನ್ ಅಣ್ಣಯ್ಯಾಚಾರ್, ಬಣದೇವಿ ಎಸ್ಟೇಟ್ ನಲ್ಲಿ
ಚಾಲಕ/ರೈಟರ್, ಮೂಡಿಗೆರೆ-ತತ್ಕೊಳ ರಸ್ತೆ,
ಕಸಬಾ ಹೋಬಳಿ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಶ್ರೀ ಕೀರ್ತಿ, ವಯಸ್ಸು ಸುಮಾರು 38 ವರ್ಷ,
ಬಿನ್ ಅಣ್ಣಪ್ಪ.ಎ.ಪಿ, ವಾಸಃ ನವಗ್ರಾಮ,
ಜೋಗಣ್ಣಕೆರೆ ಗ್ರಾಮ ಮತ್ತು ಅಂಚೆ,
ಕಸಬಾ ಹೋಬಳಿ, ಮೂಡಿಗೆರೆ ತಾಲ್ಲೂಕು.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ದಿನಾಂಕ 11.04.2023 ರಂದು ಸಂಪರ್ಕಿಸಿ, ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಅವರಿಂದ 1,80,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಸಿಡಿಸಿಸಿ ಬ್ಯಾಂಕ್ ಲಿಮಿಟೆಡ್, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ: 925081, ದಿನಾಂಕ 08.07.2024, ರೂ.1,80,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸದರಿ ಬ್ಯಾಂಕಿನಲ್ಲಿ ಜಮೆಗಾಗಿ ಸಲ್ಲಿಸಿದಾಗ, Drawer Signature Differs ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 30.07.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(*ದಿನಾಂಕ 11.06.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ*,* ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು*.* ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**Sd/-**

ಮೂಡಿಗೆರೆ
ದಿನಾಂಕ: 11.06.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.